# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಕೌಶಲ್ಯ ಅಭಿವೃದ್ಧಿ, ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 1, 5 ಮತ್ತು 9 ಶಾಖೆಗಳ ಇ-ಆಫೀಸ್ ಕಡತಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧಜಿಲ್ಲಾ/ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಕೌಶಲ್ಯ ಅಭಿವೃದ್ಧಿ, ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2210, 2230, 2851ರಡಿ ಒಟ್ಟು ರೂ.66.83ಲಕ್ಷಗಳನ್ನು ಜಿಲ್ಲಾ/ತಾಲ್ಲೂಕು ಪಂಚಾಯತಿ ಕಾರ್ಯಕ್ರಮದಡಿ ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.11.40ಲಕ್ಷ ಮತ್ತು ತಾಲ್ಲೂಕು ಪಂಚಾಯತಿ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.55.43ಲಕ್ಷಗಳನ್ನು ಅನುಕ್ರಮವಾಗಿ ಲೆಕ್ಕ ಶೀರ್ಷಿಕೆ 2515-00-196-1-05-300 ಮತ್ತು 2515-00-197-1-10-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 338 ವೆಚ್ಚ 6/2021(ಇ) ದಿನಾಂಕ: 5ನೇ ಜುಲೈ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 3ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 4 ಕಾರ್ಯಕ್ರಮದಡಿ ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 5 ಮತ್ತು 6ರ ಲೆಕ್ಕ ಶೀರ್ಷಿಕೆಗಳಡಿ ಒಟ್ಟು ರೂ.66.83ಲಕ್ಷ (ರೂಪಾಯಿ ಅರವತ್ತಾರು ಲಕ್ಷದ ಎಂಬತ್ಮೂರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)

ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ

ಸರ್ಕಾರದ ಉಪ ಕಾರ್ಯದರ್ಶಿ

ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಕೃಷಿ/ಆರೋಗ್ಯ ಮತ್ತು ಕುಟುಂಬ ಕಲ್ಯಾಣ/ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. ರಕ್ಷಾ ಕಡತಕ್ಕೆ 9. ಹೆಚ್ಚುವರಿ ಪ್ರತಿ

**ಸರ್ಕಾರದ ಆದೇಶ ಸಂಖ್ಯೆ: ಆಇ 338 ವೆಚ್ಚ 6/2021 (ಇ) ದಿನಾಂಕ:5.7.2021ಕ್ಕೆ ಅನುಬಂಧ**

| ಕ್ರ.ಸಂ. | ವೆಚ್ಚ ಶಾಖೆಯ ಕಡತ ಸಂಖ್ಯೆ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ |
|---|---|---|---|---|---|
| 1 | 2 | 3 | 4 | 5 | 6 |
| 1 | ಆಇ 243 ವೆಚ್ಚ 1/ 2021 ಇ | ಚಿತ್ರದುರ್ಗ | 2851-00-107-0-27-005 | 6.20 | |
| 2 | ಆಇ 379 ವೆಚ್ಚ 9/ 2021 ಇ | ಹಾವೇರಿ | 2230-00-101-0-26-005 | 5.20 | |
| 3 | ಆಇ 11 ವೆಚ್ಚ 5/ 2021ಇ | ಮಂಗಳೂರು<br>ಪುತ್ತೂರು<br>ಬೆಳ್ತಂಗಡಿ<br>ಸೂಳ್ಯ | 2210-00-104-0-61-005 | | 12.88<br>6.89<br>23.63<br>12.03 |
| | | ಒಟ್ಟು | | **11.40** | **55.43** |

1416596682
5.7.21

1416596744
5.7.2021